## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಡಿ. ದೇವರಾಜ ಅರಸು ಅಭಿವೃದ್ಧಿ ನಿಗಮ ನಿಯಮಿತದಿಂದ ಅನುಷ್ಠಾನಗೊಳಿಸುತ್ತಿರುವ ಹೊಲಿಗೆ ಯಂತ್ರಗಳ ಖರೀದಿ ಮತ್ತು ವಿತರಣೆಗೆ 2022-23ನೇ ಸಾಲಿನ ಕ್ರಿಯಾ ಯೋಜನೆಯಲ್ಲಿ ಅಮೃತ್ ಮುನ್ನಡೆ ಯೋಜನೆಗೆ ನಿಗಧಿಪಡಿಸಲಾದ ಅನುದಾನದಿಂದ ಬಳಸಿಕೊಳ್ಳಲು ಹಾಗೂ ಮಾರ್ಗಸೂಚಿಗಳಿಗೆ ಅನುಮೋದನೆ ನೀಡುವ ಬಗ್ಗೆ.

**ಓದಲಾಗಿದೆ:-**
1. ಸರ್ಕಾರದ ಆದೇಶ ಸಂಖ್ಯೆ: ಹಿಂವಕ 374 ಬಿಎಂಎಸ್ 2022, ದಿನಾಂಕ: 28.06.2022
2. ವ್ಯವಸ್ಥಾಪಕ ನಿರ್ದೇಶಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ ಇವರ ಪ್ರಸ್ತಾವನೆ ಸಂಖ್ಯೆ: ದೇಹಿನಿ/ಕ.ಸಾ.ರೋ/ ಹೊ.ಯ/ ಸಿಆರ್-01/A/2022-23, ದಿನಾಂಕ:02.09.2022.

*********

**ಪ್ರಸ್ತಾವನೆ:-**

ಮೇಲೆ ಓದಲಾದ (1) ರ ಸರ್ಕಾರದ ಆದೇಶದಲ್ಲಿ ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತದ ವ್ಯಾಪ್ತಿಯಲ್ಲಿ 2022-23ನೇ ಸಾಲಿನಲ್ಲಿ ವಿವಿಧ ಯೋಜನೆಗಳನ್ನು ಅನುಷ್ಠಾನಗೊಳಿಸಲು ಕ್ರಿಯಾ ಯೋಜನೆಗೆ ಅನುಮೋದನೆ ನೀಡಿ ಆದೇಶಿಸಲಾಗಿದೆ.

ಮೇಲೆ ಓದಲಾದ (2) ರ ವ್ಯವಸ್ಥಾಪಕ ನಿರ್ದೇಶಕರು, ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ ಇವರ ಪ್ರಸ್ತಾವನೆಯಲ್ಲಿ ಕರೋನಾ ಸಾಂಕ್ರಾಮಿಕ ರೋಗದ ಸಂಕಷ್ಟದ ಸಮಯದಲ್ಲಿ ತುರ್ತು ಆದಾಯದ ಮೂಲವನ್ನು ಕಂಡುಕೊಳ್ಳಲು ಅನುವಾಗುವಂತೆ ಬಡ ಕುಟುಂಬದ ಮಹಿಳೆಯರಿಗೆ ಹೊಲಿಗೆ ಯಂತ್ರಗಳನ್ನು ವಿತರಿಸುವ ಸ್ವಾವಲಂಭಿ ಯೋಜನೆಯನ್ನು ಅನುಷ್ಠಾನಗೊಳಿಸುವುದು ಅತೀ ಅವಶ್ಯಕವಾಗಿದ್ದು, ಪ್ರತಿ ಜಿಲ್ಲೆಯಲ್ಲಿ 833 ಫಲಾನುಭವಿಗಳಂತೆ ಆಯ್ಕೆ ಮಾಡಿ, ಪ್ರತಿ ಫಲಾನುಭವಿಗೆ ರೂ.18,000/- ಮೌಲ್ಯದ ಹೊಲಿಗೆ ಯಂತ್ರಗಳನ್ನು ಖರೀದಿಸಲು ಅಂದಾಜು ಮೊತ್ತ ರೂ.48.00 ಕೋಟಿಗಳ ಅನುದಾನದ ಅವಶ್ಯಕತೆ ಇರುತ್ತದೆ ಹಾಗೂ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮಕ್ಕೆ 2022-23ನೇ ಸಾಲಿನ ಪೂರಕ ಅಂದಾಜು-1ರಲ್ಲಿ ರೂ.100.00ಕೋಟಿಗಳ ಹೆಚ್ಚುವರಿ ಅನುದಾನವನ್ನು ಒದಗಿಸುವುದಾಗಿ ತಿಳಿಸಲಾಗಿರುತ್ತದೆ. ಈ ಮೊತ್ತದಲ್ಲಿ ಪ್ರಸ್ತುತ ಪ್ರಸ್ತಾಪಿಸಿರುವ ಬಡ ಕುಟುಂಬದ ಮಹಿಳೆಯರಿಗೆ ಹೊಲಿಗೆ ಯಂತ್ರ ವಿತರಿಸುವ ಯೋಜನೆಗೆ ತಗಲುವ ಅಂದಾಜು ಮೊತ್ತ ರೂ.48.00 ಕೋಟಿಗಳನ್ನು ವಿನಿಯೋಗಿಸಲು ಹಾಗೂ ಯೋಜನೆಯ ಅನುಷ್ಠಾನಕ್ಕೆ ರೂಪಿಸಿರುವ ಮಾರ್ಗಸೂಚಿಗಳಿಗೆ ಅನುಮೋದನೆ ನೀಡುವಂತೆ ಕೋರಲಾಗಿರುತ್ತದೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 428 ಬಿಎಂಎಸ್ 2022,**
**ಬೆಂಗಳೂರು, ದಿನಾಂಕ:08-11-2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತದ ವತಿಯಿಂದ ಅನುಷ್ಠಾನಗೊಳಿಸಲು ಉದ್ದೇಶಿಸಿರುವ ಬಡ ಕುಟುಂಬದ ಮಹಿಳೆಯರಿಗೆ ಹೊಲಿಗೆಯಂತ್ರ ವಿತರಣೆ ಯೋಜನೆಗೆ 2022-23 ನೇ ಸಾಲಿನ ನಿಗಮದ ಕ್ರಿಯಾ ಯೋಜನೆಯಲ್ಲಿ ಅಮೃತ್ ಮುನ್ನಡೆ ಎಂಬ ಹೊಸ ಯೋಜನೆಗೆ ನಿಗಧಿಪಡಿಸಲಾದ ರೂ.20.00 ಕೋಟಿಗಳ ಅನುದಾನದಲ್ಲಿ ರೂ.10.00 ಕೋಟಿಗಳನ್ನು ಹೊಲಿಗೆ ಯಂತ್ರಗಳ ಖರೀದಿ ಮತ್ತು ವಿತರಣೆಗೆ ಬಳಸಿಕೊಳ್ಳಲು ಸರ್ಕಾರದ ಅನುಮೋದನೆ ನೀಡಿ ಆದೇಶಿಸಿದೆ.

8/11/22

....2

ಈ ಉದ್ದೇಶಕ್ಕೆ ಖರೀದಿಸಲಾಗುವ ಹೊಲಿಗೆ ಯಂತ್ರಗಳನ್ನು ಕೆ.ಟಿ.ಪಿ.ಪಿ ಕಾಯ್ದೆ ಹಾಗೂ ನಿಯಮಗಳನ್ನು ಅನುಸರಿಸಿ ಟೆಂಡರ್ ಆಹ್ವಾನಿಸಿ ಕ್ರಮ ಕೈಗೊಳ್ಳತಕ್ಕದ್ದು.

ಹೊಲಿಗೆ ಯಂತ್ರಗಳ ಖರೀದಿ ಮತ್ತು ವಿತರಣೆ ಕಾರ್ಯಕ್ರಮವನ್ನು ಈ ಆದೇಶದ ಅನುಬಂಧದಲ್ಲಿನ ಮಾರ್ಗಸೂಚಿಗಳಂತೆ ಅನುಷ್ಠಾನಗೊಳಿಸತಕ್ಕದ್ದು.

ಈ ಆದೇಶವನ್ನು ಮಾನ್ಯ ಇಲಾಖಾ ಸಚಿವರ ಅನುಮೋದನೆ ಹಾಗೂ ಸರ್ಕಾರದ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

Shaheenparveen 08/11/2022

**(ಷಾಹೀನ್ ಪರ್ವೀನ್.ಕೆ)**
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

08/11

**ಇವರಿಗೆ:-**

1. ಪ್ರಧಾನ ಮಹಾಲೇಖಪಾಲರು, (ಎ ಮತ್ತು ಇ), ಬೆಂಗಳೂರು.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು.
2. ರಾಜ್ಯ ಖಜಾನಾಧಿಕಾರಿಗಳು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.

**ಪ್ರತಿ ಮಾಹಿತಿಗಾಗಿ:-**

1. ಸರ್ಕಾರದ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ, ಬೆಂಗಳೂರು.
2. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಸಹಾಯಕರು, ವಿಕಾಸಸೌಧ, ಬೆಂಗಳೂರು.
3. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

********

# ಅನುಬಂಧ

## ಸರ್ಕಾರದ ಆದೇಶ ಸಂಖ್ಯೆ:ಹಿಂವಕ 428 ಬಿಎಂಎಸ್ 2022 ದಿನಾಂಕ: 08 .11.2022

**ಯೋಜನೆಯ ಉದ್ದೇಶ:-**

- ಕರೋನಾ ಸಾಂಕ್ರಾಮಿಕ ರೋಗದ ಸಂಕಷ್ಟದ ಸಮಯದಲ್ಲಿ ತುರ್ತು ಆದಾಯದ ಮೂಲವನ್ನು ಕಂಡುಕೊಳ್ಳಲು ಅನುವಾಗುವಂತೆ ಹಿಂದುಳಿದ ವರ್ಗಗಳಿಗೆ ಸೇರಿದ ಬಡ ಕುಟುಂಬದ ಮಹಿಳೆಯರಿಗೆ ಹಾಗೂ ಕುಟುಂಬದ ಮುಖ್ಯಸ್ಥರನ್ನು ಕಳೆದುಕೊಂಡು ಕುಟುಂಬವನ್ನು ನಿರ್ವಹಿಸಲು ಸಂಕಷ್ಟ ಪಡುತ್ತಿರುವ ಕುಟುಂಬದವರಿಗೆ ತುರ್ತಾಗಿ ಆರ್ಥಿಕ ಚೈತನ್ಯಕ್ಕಾಗಿ ಮಹಿಳೆಯರಿಗೆ ಉಚಿತವಾಗಿ ಹೊಲಿಗೆ ಯಂತ್ರವನ್ನು ವಿತರಿಸುವುದು ಹಾಗೂ 2022-23 ನೇ ಸಾಲಿಗೆ ಮಾತ್ರ ಅನ್ವಯವಾಗುವಂತೆ ಈ ಯೋಜನೆಯನ್ನು ಅನುಷ್ಠಾನಗೊಳಿಸುವುದು.

**ಯೋಜನೆಗೆ ಅರ್ಹತೆಗಳು:-**

1. ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರತಕ್ಕದ್ದು.
2. ಅರ್ಜಿದಾರರು ಹಿಂದುಳಿದ ವರ್ಗಗಳ ಪ್ರವರ್ಗ-1, 2ಎ, 3ಎ ಮತ್ತು 3ಬಿ ಗೆ ಸೇರಿದವರಾಗಿರಬೇಕು ಹಾಗೂ ಈ ಯೋಜನೆಯಲ್ಲಿ ವಿಧವೆಯರಿಗೆ ಆಯ್ಕೆಯಲ್ಲಿ ಆದ್ಯತೆ ನೀಡತಕ್ಕದ್ದು.
3. ಅರ್ಜಿದಾರರ ವಯಸ್ಸು ಕನಿಷ್ಠ 18 ವರ್ಷಗಳು ಹಾಗೂ ಗರಿಷ್ಠ 55 ವರ್ಷಗಳನ್ನು ಮೀರಿರತಕ್ಕದ್ದಲ್ಲ.
4. ಒಂದು ಕುಟುಂಬದಲ್ಲಿ ಓರ್ವ ಸದಸ್ಯರನ್ನು ಮಾತ್ರ ಈ ಸೌಲಭ್ಯಕ್ಕೆ ಪರಿಗಣಿಸತಕ್ಕದ್ದು.
5. ಅರ್ಜಿದಾರರ ಕುಟುಂಬದ ವಾರ್ಷಿಕ ವರಮಾನವು ಗ್ರಾಮೀಣ ಪ್ರದೇಶದಲ್ಲಿರೂ.98,000/- ಹಾಗೂ ನಗರ ಪ್ರದೇಶದಲ್ಲಿ ರೂ.1,20,000/-ಗಳನ್ನು ಮೀರತಕ್ಕದ್ದಲ್ಲ.
6. ಅಂಗವಿಕಲ ಮಹಿಳೆಯರಿಗೆ ಶೇ.5 ರಷ್ಟು ಮೀಸಲಿರಿಸತಕ್ಕದ್ದು.
7. ವಿಧವೆಯರಿಗೆ, ಪರಿತ್ಯಕ್ತ ಮಹಿಳೆಯರಿಗೆ ಹೆಚ್.ಐ.ವಿ ಪೀಡಿತರಿಗೆ, 35 ವರ್ಷ ವಯೋಮಿತಿ ಮೀರಿರತಕ್ಕ ಅವಿವಾಹಿತ ಮಹಿಳೆಯರಿಗೆ ಶೇ. 2 ರಷ್ಟನ್ನು ಮೀಸಲಿರಿಸುವುದು.
8. ಪ್ರವರ್ಗ-1 ಮತ್ತು 2ಎ ಗೆ ಶೇ.85 ರಷ್ಟು ಹಾಗೂ ಪ್ರವರ್ಗ-3ಎ ಮತ್ತು 3ಬಿ ಗೆ ಶೇ.3 ರಷ್ಟು ಅನುಪಾತದಲ್ಲಿ ಆಯ್ಕೆ ಮಾಡಬೇಕು.

**ಸೌಲಭ್ಯ:-**

ನಿಗಮದಿಂದ ಗರಿಷ್ಟ ರೂ.15,000/- ಮೌಲ್ಯದ ಮಿತಿಯಲ್ಲಿ ಹೊಲಿಗೆ ಯಂತ್ರವನ್ನು ಖರೀದಿಸಿ ಫಲಾನುಭವಿಗಳಿಗೆ ಉಚಿತವಾಗಿ ವಿತರಿಸುವುದು.

**ಫಲಾನುಭವಿಗಳ ಆಯ್ಕೆ ಸಮಿತಿ:-**

ಈ ಯೋಜನೆಯಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡಲು ಮಾನ್ಯ ಶಾಸಕರ ಅಧ್ಯಕ್ಷತೆಯಲ್ಲಿ ಈ ಕೆಳಕಂಡ ಸದಸ್ಯರುಗಳನ್ನೊಳಗೊಂಡ ಆಯ್ಕೆ ಸಮಿತಿಯನ್ನು ರಚಿಸಲಾಗಿರುತ್ತದೆ.

| ಕ್ರ. ಸಂ | ಹುದ್ದೆ | ಪದನಾಮ |
|---|---|---|
| 1 | ಆಯಾ ವಿಧಾನಸಭಾ ಕ್ಷೇತ್ರದ ಮಾನ್ಯ ಶಾಸಕರು | ಅಧ್ಯಕ್ಷರು |
| 2 | ತಹಶೀಲ್ದಾರ್ | ಸದಸ್ಯರು |
| 3 | ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು | ಸದಸ್ಯರು |
| 4 | ತಾಲ್ಲೂಕು ಮಟ್ಟದ ಆರೋಗ್ಯ ಅಧಿಕಾರಿಗಳು | ಸದಸ್ಯರು |
| 5 | ತಾಲ್ಲೂಕು ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ | ಸದಸ್ಯರು |

....3

8/11/22

| | | |
|---|---|---|
| 6 | ಆಯಾ ಜಿಲ್ಲೆಯಲ್ಲಿ ವಾಸವಿರತಕ್ಕ ನಿಗಮದ ನಿರ್ದೇಶಕ ಮಂಡಳಿಯ ನಾಮನಿರ್ದೇಶಕರು. | ಸದಸ್ಯರು |
| 7 | ಜಿಲ್ಲಾ ವ್ಯವಸ್ಥಾಪಕರು, ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ. | ಸದಸ್ಯ ಕಾರ್ಯದರ್ಶಿ |

**ಆಯ್ಕೆ ಸಮಿತಿ ಕರ್ತವ್ಯಗಳು:-**

ಆಯಾ ತಾಲ್ಲೂಕುಗಳಲ್ಲಿ ಹಿಂದುಳಿದ ವರ್ಗಗಳ ಕುಟುಂಬಗಳ ಸದಸ್ಯರುಗಳಿಂದ ಸ್ವೀಕೃತಗೊಂಡಂತಹ ಅರ್ಜಿಗಳನ್ನು ಪರಿಶೀಲಿಸಿ, ಕುಟುಂಬದ ಆರ್ಥಿಕ ಹಿನ್ನೆಲೆಯನ್ನು ಗಮನಿಸಿಕೊಂಡು, ಅರ್ಹ ಫಲಾನುಭವಿಗಳನ್ನು ಆಯಾ ಕ್ಷೇತ್ರಕ್ಕೆ ನಿಗಧಿಪಡಿಸಿ, ಗುರಿಯ ಮಿತಿಯಲ್ಲಿ ಆಯ್ಕೆ ಮಾಡುವುದು ಹಾಗೂ ಆಯ್ಕೆ ಪಟ್ಟಿಯನ್ನು ಅನುಮೋದಿಸಿ ನಿಗಮದ ಜಿಲ್ಲಾ ಕಛೇರಿಗೆ ಪ್ರಸ್ತಾವನೆಯನ್ನು ಸಲ್ಲಿಸುವುದು.

**ಅರ್ಜಿದಾರರು ಅರ್ಜಿಗಳೊಂದಿಗೆ ಸಲ್ಲಿಸಬೇಕಾದ ದಾಖಲಾತಿಗಳು:**

1. ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರುವ ಬಗ್ಗೆ ವಾಸಸ್ಥಳ ದೃಢೀಕರಣದ ಬಗ್ಗೆ ಆಧಾರ್ ಕಾರ್ಡ್ ಜೆರಾಕ್ಸ್ ಪ್ರತಿ.
2. ಅರ್ಜಿದಾರರು ಹಿಂದುಳಿದ ವರ್ಗಗಳ ಪ್ರವರ್ಗ-1, 2ಎ, 3ಎ ಮತ್ತು 3ಬಿ ವರ್ಗೀಕರಣದೊಳಗಿರುವ ಹಾಗೂ ಕುಟುಂಬದ ವಾರ್ಷಿಕ ವರಮಾನ ಗ್ರಾಮೀಣ ಪ್ರದೇಶದಲ್ಲಿ ರೂ. 98,000/- ಹಾಗೂ ನಗರ ಪ್ರದೇಶದಲ್ಲಿ ರೂ.1,20,000/- ರೊಳಗಿರುವ ಬಗ್ಗೆ ಕಂದಾಯ ಅಧಿಕಾರಿಗಳಿಂದ ಪಡೆದಿರುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರ.

**ಮಂಜೂರಾತಿ ವಿಧಾನ:**

ಆಯಾ ವಿಧಾನಸಭಾ ಕ್ಷೇತ್ರದ ಆಯ್ಕೆ ಸಮಿತಿಗಳು ಆಯ್ಕೆ ಮಾಡಿದ ಫಲಾನುಭವಿಗಳಿಗೆ ಆಯಾ ಕ್ಷೇತ್ರಕ್ಕೆ ನಿಗದಿಪಡಿಸಿರುವ ಗುರಿಯನ್ವಯ ಟೈಲರಿಂಗ್/ಹೊಲಿಗೆ ಯಂತ್ರಗಳನ್ನು ಕೇಂದ್ರ ಕಚೇರಿಯಿಂದ ಸರಬರಾಜು ಮಾಡಲು ಕೋರಿ ಪ್ರಸ್ತಾವನೆಯನ್ನು ಸಲ್ಲಿಸುವುದು, ಕೇಂದ್ರ ಕಛೇರಿಯಲ್ಲಿ ಹೊಲಿಗೆ ಯಂತ್ರಗಳನ್ನು ಪಾರದರ್ಶಕ ನಿಯಮಗಳನುಸಾರ ಖರೀದಿಸಿ, ಆಯಾ ವಿಧಾನಸಭಾ ಕ್ಷೇತ್ರದ ಬೇಡಿಕೆಗೆ ಅನುಸಾರವಾಗಿ ನಿಗಮದ ಜಿಲ್ಲಾ ಕಚೇರಿಗಳಿಗೆ ಸರಬರಾಜು ಮಾಡುವುದು. ಜಿಲ್ಲಾ ಕಛೇರಿಯ ಅಧಿಕಾರಿಗಳು, ಆಯಾ ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರು/ಮಾನ್ಯ ಶಾಸಕರುಗಳ ಮೂಲಕ ಹೊಲಿಗೆ ಯಂತ್ರಗಳನ್ನು ಫಲಾನುಭವಿಗಳಿಗೆ ವಿತರಿಸುವುದು. ವಿತರಿಸುವ ಮುನ್ನ ಹೊಲಿಗೆ ಯಂತ್ರಗಳು ಸುಸ್ಥಿತಿಯಲ್ಲಿರುವ ಕುರಿತು ಖಾತರಿಪಡಿಸಿಕೊಳ್ಳುವುದು. ಹೊಲಿಗೆ ಯಂತ್ರವನ್ನು ಅಯ್ಕೆ ಸಮಿತಿಯಿಂದ ಆಯ್ಕೆಯಾದ ಫಲಾನುಭವಿಗೆ ವಿತರಿಸಿ, ಸ್ವೀಕೃತಿ ಪಡೆದು ದಾಖಲೆಗಳನ್ನು ನಿರ್ವಹಿಸುವುದು ಜಿಲ್ಲಾ ವ್ಯವಸ್ಥಾಪಕರ ಜವಾಬ್ದಾರಿಯಾಗಿರುತ್ತದೆ.

**ಸೌಲಭ್ಯದ ಉಪಯೋಗ:**

ಸೌಲಭ್ಯವನ್ನು ಪಡೆದುಕೊಂಡ ಮಹಿಳೆಯರು ಕಡ್ಡಾಯವಾಗಿ ಹೊಲಿಗೆ ಯಂತ್ರವನ್ನು ಬಳಸತಕ್ಕದ್ದು. ಯಾವುದೇ ಕಾರಣಕ್ಕೂ ಹೊಲಿಗೆ ಯಂತ್ರವನ್ನು ದುರುಪಯೋಗ ಪಡಿಸಿಕೊಳ್ಳುವುದು/ಬಾಡಿಗೆಗೆ ನೀಡುವುದು / ಮಾರಾಟ ಮಾಡುವುದು ಇತ್ಯಾದಿಗಳನ್ನು ಮಾಡ ತಕ್ಕದ್ದಲ್ಲ. ಈ ಬಗ್ಗೆ ನಿಗಮದ ಅಧಿಕಾರಿಗಳು ಪರಿಶೀಲನೆಗೆ ಭೇಟಿ ನೀಡಿದಾಗ ಹೊಲಿಗೆ ಯಂತ್ರಗಳನ್ನು ಹಾಜರು ಪಡಿಸತಕ್ಕದ್ದು. ಹೊಲಿಗೆ ಯಂತ್ರಗಳನ್ನು ಮಾರಾಟ ಮಾಡಿದ್ದು ತಿಳಿದುಬಂದಲ್ಲಿ, ಹೊಲಿಗೆ ಯಂತ್ರದ ಸಂಪೂರ್ಣ ಮೊತ್ತವನ್ನು ಫಲಾನುಭವಿಗಳು ನಿಗಮಕ್ಕೆ ಪಾವತಿಸಬೇಕಾಗುವುದು. ಈ ಬಗ್ಗೆ ಜಿಲ್ಲಾ ವ್ಯವಸ್ಥಾಪಕರು ಸೂಕ್ತವಾಗಿ ಕ್ರಮ ಕೈಗೊಳ್ಳುವುದು.

Sheenparveen 08/11/2022

(ಷಾಹೀನ್ ಪರ್ವೀನ್.ಕೆ)
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.